ಕರ್ನಾಟಕ ಲೋಕಸೇವಾ ಆಯೋಗವು ಪ್ರಥಮ ದರ್ಜೆ ಸಹಾಯಕರ ಹುದ್ದೆಗೆ ಮಾಡಿರುವ ಆಯ್ಕೆ ಬಗ್ಗೆ

೧೦೮೧. (ಬಿ) ಶ್ರೀ ಬಿ ಎಸ್ ಯಡಿಯೂರಪ್ಪ (ಶಿಕಾರಿಪುರ).— ಮಾನ್ಯ ಮುಖ್ಯಮಂತ್ರಿಗಳು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೇ ?

ಅ) ೧೯೮೫-೮೬ನೇ ಸಾಲಿನಲ್ಲಿ ಪ್ರಥಮ ದರ್ಜೆ ಗುಮಾಸ್ತರ ಹುದ್ದೆಗೆ ಕರ್ನಾಟಕ ಲೋಕಸೇವಾ ಆಯೋಗದಿಂದ ಆಯ್ಕೆ ಆದ ಮೇಲೆ ಸಂಬಂಧಪಟ್ಟ ಅಭ್ಯರ್ಥಿಗಳನ್ನು ಒಂದು ಇಲಾಖೆಗೆ ಅವರನ್ನು ಹಾಕಿದ ಮೇಲೆ ಮತ್ತೊಂದು ಇಲಾಖೆಗೆ ಕಾನೂನು ಬಾಹಿರವಾಗಿ ವರ್ಗಾಯಿಸಿರುವುದು ನಿಜವೆ ?

ಆ) ೧೯೮೫-೮೬ನೇ ಸಾಲಿನಲ್ಲಿ ಈ ರೀತಿ ಒಂದು ಇಲಾಖೆಯಿಂದ ಮತ್ತೊಂದು ಇಲಾಖೆಗೆ ವರ್ಗಾಯಿಸಿರುವ ಪ್ರಕರಣಗಳ ಸಂಖ್ಯೆ ಎಷ್ಟು ?

ಇ) ಈ ರೀತಿ ಒಂದು ಇಲಾಖೆಯಿಂದ ಮತ್ತೊಂದು ಇಲಾಖೆಗೆ ವರ್ಗಾಯಿಸಿರುವ ಬಗ್ಗೆ ರಾಜ್ಯ ಪತ್ರದಲ್ಲಿ ಅಧಿಸೂಚನೆಯನ್ನು ಹೊರಡಿಸಲಾಗಿದೆಯೇ ?

ಶ್ರೀ ರಾಮಕೃಷ್ಣ ಹೆಗಡೆ (ಮುಖ್ಯಮಂತ್ರಿಯವರು).--

ಅ) ಇಲ್ಲ.

ಆ) ಉದ್ಭವಿಸುವುದಿಲ್ಲ.

ಇ) ಇಲ್ಲ.

ಕಾಪು ಪೋಲೀಸ್ ಠಾಣೆಯ ಬಗ್ಗೆ

೧೦೮೩. ಶ್ರೀ ವಸಂತ. ವಿ. ಸಾಲಿಯಾನ (ಕಾಪು).—ಮಾನ್ಯ ಗೃಹಮಂತ್ರಿಗಳು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೇ ?

ಅ) ಕಾಪು ಕ್ಷೇತ್ರದಲ್ಲಿಯು ಪೋಲೀಸ್ ಹೊರ ಠಾಣೆಯು ಎಷ್ಟು ವರ್ಷಗಳಿಂದ ಅಸ್ತಿತ್ವದಲ್ಲಿದೆ ಹಾಗೂ ಪ್ರಸ್ತುತ ಈ ಠಾಣೆಯಲ್ಲಿರುವ ಸಿಬ್ಬಂದಿಯ ಸಂಖ್ಯೆ ಎಷ್ಟು ?

ಆ) ಸದರಿ ಹೊರ ಠಾಣೆಯನ್ನು ಪೂರ್ಣ ಪ್ರಮಾಣದ ಠಾಣೆಯನ್ನಾಗಿ ಪರಿವರ್ತಿಸಲು ಸರ್ಕಾರ ಯೋಚಿಸುತ್ತಿದೆಯೇ ?

ಇ) ಹಾಗಿದ್ದಲ್ಲಿ ಯಾವಾಗ ಪರಿವರ್ತಿಸಲಾಗುವುದು ?

ಶ್ರೀ ಬಿ. ರಾಚಯ್ಯ (ಗೃಹ ಮಂತ್ರಿಗಳು).--

ಅ) ೧೯೫೦ರಿಂದ ಅಸ್ತಿತ್ವದಲ್ಲಿದೆ. ಸಿಬ್ಬಂದಿಯ ಸಂಖ್ಯೆ ಮುಖ್ಯಪೇದೆ (೧) ಮತ್ತು ಪೋಲೀಸ್ ಪೇದೆಗಳು (೪).

ಆ) ಇಲ್ಲ.

ಇ) ಉದ್ಭವಿಸುವುದಿಲ್ಲ.

ಮೇಕೆದಾಟು ಮತ್ತು ಸಂಗಮವನ್ನು ಪ್ರವಾಸೋದ್ಯಮ ಕ್ಷೇತ್ರವಾಗಿ ಅಭಿವೃದ್ಧಿ ಪಡಿಸುವ ಬಗ್ಗೆ

೧೦೮೪. ಶ್ರೀ ಕೆ. ಎಲ್. ಶಿವಲಿಂಗೇಗೌಡ (ಸಾಸನೂರು).—ಮಾನ್ಯ ಮುಖ್ಯ ಮಂತ್ರಿಗಳು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ ?

ಅ) ಕನಕಪುರ ತಾಲ್ಲೂಕು, ಉಯ್ಯಂಬಳ್ಳಿ, ಹೋಬಳಿ, ಮೇಕೆದಾಟು ಮತ್ತು ಸಂಗಮವನ್ನು ಪ್ರವಾಸೋದ್ಯಮ ಕ್ಷೇತ್ರವನ್ನಾಗಿ ಮಾಡಿ ಎಷ್ಟು ವರ್ಷಗಳಾಯ್ತು.